# <u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ</u>

## <u>ಕೆ ಆರ್ ನಗರ.</u>

## <u>ಸಿ.ಸಿ. ನಂ. 154/2026</u>

ಪಿರ್ಯಾದಿ ಃ ಸರ್ಕಾರದ ಪರ ಕೆ ಆರ್ ನಗರ ಪೋಲೀಸ್ ಠಾಣೆ

ಃವಿರುದ್ಧ ಃ

ಆರೋಪಿ ಃ ಗುರು ಎಚ್ ಆರ್. ಬಿನ್ ಲೇಟ್ ರೇವಣ್ಣ
ವಯಸ್ಸುಃ 29 ವರ್ಷ,
ವಾಸಃ ಹೊಸೂರು ಗ್ರಾಮ,
ಸಾಲೀಗ್ರಾಮ ತಾಲ್ಲೂಕು,
ಮೈಸುರು ಜಿಲ್ಲೆ.

## <u>ದೋಷಾರೋಪಣೆ</u>

ಶ್ರೀ ಚಂದನ್.ಎಸ್ ಬಿ.ಕಾಮ್.,ಎಲ್.ಎಲ್.ಬಿ. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ನ್ಯಾಯಿಕ ದಂಡಾಧಿಕಾರಿ ನಾಯಾಧೀಶರು, ಕೆ.ಆರ್.ನಗರ ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಈ ಕೆಳಗಿನಂತೆ ದೋಷಾರೋಪಿಸುವುದೇನೆಂದರೆಃ

ದಿನಾಂಕಃ 14-01-2026 ರಂದು ಸಂಜೆ 7.30 ಗಂಟೆ ಸಮಯದಲ್ಲಿ ಕೆ.ಆರ್.ನಗರ ತಾಲ್ಲೂಕು ಕೆ.ಆರ್ ನಗರ ಪೊಲೀಸ್ ಠಾಣಾ ಸರಹದ್ದು ಕೆಸ್ತೂರು ಗೇಟ್ ಬಳಿ ಇರುವ ಜಯರಾಮೇಗೌಡ ರವರ ಮನೆಯ ಮುಂದೆ ಹಾದು ಹೋಗಿರುವ ಕೆ.ಆರ್.ನಗರ ಚುಂಚನಕಟ್ಟೆ ಬಳಿ ಚಾಸಾ-1- ಎಚ್ ಬಿ ಕೃಷ್ಣೇಗೌಡ ರವರು ಜಯರಾಮೇಗೌಡ ರವರ ಅಂಗಡಿಯಲ್ಲಿ ಸಾಮಾನು ತೆಗೆದುಕೊಂಡು ವಾಹನ ಸಂಖ್ಯೆ ಕೆಎ-02 ಇಎಫ್-4496 ಹೀರೋ ಹೊಂಡಾ ಮೋಟಾರ್ ಬೈಕಿನಲ್ಲಿ ಹೊಸಕೊಪ್ಪಲು ಗ್ರಾಮಕ್ಕೆ ಹೋಗುವಾಗ ಆರೋಪಿಯಾದ ನೀವು ವಾಹನ ಸಂಖ್ೆ್ಯ ಕೆಎ 45-ಡಬ್ಲ್ಯೂ-0166 ಹೀರೋ ಹೊಂಡಾ ಸ್ಲಂಡರ್ ನ್ನು ಅತಿವೇಗ ಹಾಗೂ ಅಜಾಗರೂಕತೆಯಿಂದ ಹಿಂಬದಿಯಿಂದ ಓಡಿಸಿಕೊಂಡು ಬಂದು ಚಾಸಾ-01 ರವರ ಮೋಟಾರ್ ಬೈಕ್ ಹಿಂಬದಿಗೆ ಡಿಕ್ಕಿ ಮಾಡಿ ಅಪಘಾತವಾಗಿರುತ್ತದೆ. ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ಅಡಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರಿ ಎಂದು ಆರೋಪಣೆ ಹೊರಿಸಲಾಗಿದೆ.

ಎರಡನೇಯದಾಗಿ ಮೇಲೆ ಹೇಳಿದ ತಾರೀಖು, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ವಾಹನ ಸಂಖ್ಯೆ ಕೆಎ 45-ಡಬ್ಲ್ಯೂ-0166 ಹೀರೋ ಹೊಂಡಾ ಸ್ಲಂಡರ್ ಬೈಕ್‌ನ್ನು ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಅತಿವೇಗ ಮತ್ತು

ಅಜಾಗರೂಕತೆಯಿಂದ ಚಾಲನೆ ಮಾಡಿದ್ದರಿಂದ ಚಾಸಾ-1 ರವರು ಮೋಟಾರ್ ಬೈಕ್ ಸಮೇತ ಕೆಳಕ್ಕೆ ಬಿದ್ದು, ಚಾಸಾ-1 ರವರ ಬಲಕಾಲಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ. ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ **ಕಲಂ 125(ಬಿ)** ರಡಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರಿ ಎಂದು ಆರೋಪಣೆ ಹೊರಿಸಲಾಗಿದೆ.

ಪ್ರಃ 1) ಕನ್ನಡದಲ್ಲಿ ಓದಿ ಹೇಳಿದ ಮೇಲಿನ ದೋಷಾರೋಪಣೆ ಅರ್ಥವಾಯಿತೇ?
ಉಃ ಅರ್ಥವಾಯಿತು

ಪ್ರಃ 2) ಅಪರಾಧವನ್ನು ಒಪ್ಪಿಕೊಳ್ಳುವಿರೋ ಅಥವಾ ಸಾಕ್ಷಿಗಳ ವಿಚಾರಣೆಯಾಗ ಬಯಸುವಿರಾ?
ಉಃ ಒಪ್ಪಿಕೊಳ್ಳುತ್ತೇನೆ

ಆರೋಪಿಯ ವಿರುದ್ಧ ದೋಷಾರೋಪಣೆ ರಚಿಸಿ ನೇರವಾಗಿ ಓದಿ ತಿಳಿಸಿದ ನಂತರ ಆತನು ಕೊಟ್ಟ ಉತ್ತರವನ್ನೇ ಸರಿಯಾಗಿ ಪಡೆದುಕೊಳ್ಳಲಾಯಿತೆಂದು ದೃಢೀಕರಿಸಿದೆ.

ದಿಃ 07-03-2026

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ.ಗಳು,
ಕೆ ಆರ್ ನಗರ.

**ಆರೋಪಿಯ ಸಹಿಃ**